ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-1

ಸಂಖ್ಯೆ: ಸಿ4(5) ದೈ.ಶಿಬಡ್ತಿ ಗ್ರೇಡ್-2ಗ್ರೇಡ್-16094/05-06 ದಿನಾಂಕ: 30-05-2015

ಸುತ್ತೋಲೆ

ವಿಷಯ: ಸರ್ಕಾರಿ ಪ್ರೌಢಶಾಲೆಗಳಲ್ಲಿರುವ ಗ್ರೇಡ್-2 ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಯನ್ನು ಗ್ರೇಡ್-1 ಹುದ್ದೆಗಳನ್ನಾಗಿ ನಿಮ್ನೀಕರಣಗೊಳಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಇಡಿ 203 ಎಸ್‌ಎಲ್‌ಬಿ 96 ದಿನಾಂಕ:04-2-2002.

---

ಪ್ರಸ್ತಾವನೆ:

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರಿ ಪ್ರೌಢಶಾಲೆಗಳಲ್ಲಿ ಗ್ರೇಡ್-2 ದೈಹಿಕ ಶಿಕ್ಷಣ ಶಿಕ್ಷಕರಿಗೆ ಗ್ರೇಡ್-1 ಹುದ್ದೆಗಳಿಗೆ ಕೆಲವು ಜಿಲ್ಲೆಗಳಲ್ಲಿ ಬಡ್ತಿ ನೀಡಲಾಗುತ್ತಿರಲಿಲ್ಲವೆಂದು ಶಿಕ್ಷಕರು ದೂರನ್ನು ನೀಡಿರುತ್ತಾರೆ. ಇದಲ್ಲದೆ ಮಾಹಿತಿ ಹಕ್ಕು ಅಧಿನಿಯಮದಡಿ ಮಾಹಿತಿಯನ್ನು ಕೋರಿದ್ದಾರೆ. ಈ ಹಿನ್ನಲೆಯಲ್ಲಿ ಸರ್ಕಾರದ ಆದೇಶದಂತೆ ಅರ್ಜಿಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಆದೇಶ:

ಉಲ್ಲೇಖಿತ ಸರ್ಕಾರದ ಆದೇಶದಂತೆ, ಸೀನಿಯರ್ ಗ್ರೇಡ್-1 ಅಥವಾ ಸೀನಿಯರ್ ಗ್ರೇಡ್-2 ದೈಹಿಕ ಶಿಕ್ಷಣ ಶಿಕ್ಷಕರು ಹುದ್ದೆಯನ್ನು ಹೊಂದಿರುವ ಶಿಕ್ಷಕರು ಮುಂಬಡ್ತಿ ಅಥವಾ ನಿಧನ ಅಥವಾ ನಿವೃತ್ತಿ ಅಥವಾ ಇನ್ನಾವುದೇ ಕಾರಣಗಳಿಗಾಗಿ ಈ ಹುದ್ದೆಗಳನ್ನು ತೆರವು ಮಾಡಿದ್ದಲ್ಲಿ ಈ ಹುದ್ದೆಯು ತಾನೇ ತಾನಾಗಿ ಗ್ರೇಡ್-1 ಮತ್ತು ಗ್ರೇಡ್-2 ಹುದ್ದೆಗೆ ಸಂದರ್ಭಕ್ಕೆ ಅನುಸಾರವಾಗಿ ನಿಮ್ನೀಕರಣಗೊಳ್ಳುವುದು ಎಂದಿದೆ. ಆದ್ದರಿಂದ ಹಾಲಿ ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಗ್ರೇಡ್-2 ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳನ್ನು ಗ್ರೇಡ್-1 ಹುದ್ದೆಗಳೆಂದು ಪರಿಗಣಿಸಿಕೊಳ್ಳುವಂತೆ ತಿಳಿಸಿದೆ.

(ಮಾನ್ಯ ಆಯುಕ್ತರ ಆದೇಶದ ಮೇರೆಗೆ)

ನಿರ್ದೇಶಕರು(ಪ್ರೌಢಶಿಕ್ಷಣ)

ಪ್ರತಿಯನ್ನು:

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ (ಆಡಳಿತ)
2. ಶ್ರೀ.ಮಹಾದೇವಸ್ವಾಮಿ, ಕೇರ್ ಆಫ್ ಎನ್. ಮಲ್ಲಿಕಾರ್ಜುನಸ್ವಾಮಿ, #12/15 ಅಗ್ರಹಾರಬೀದಿ, ಚಾಮರಾಜನಗರ ತಾಲ್ಲೂಕು ಮತ್ತು ಜಿಲ್ಲೆ. 3.ಕ/ಪ್ರ

kpeta.weebly.com

Scanned by CamScanner